ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 6/12/19

# ಶಾಸಕ ಅಜಯ್ ಸಿಂಗ್ ವಿರುದ್ಧ ಬಿಜೆಪಿ ದೂರು

ಉ.ವಾ 6-12-19

ಬೆಂಗಳೂರು: ಕಾಂಗ್ರೆಸ್ ಶಾಸಕ ಅಜಯ್ ಸಿಂಗ್ ಅವರು ನೀತಿ ಸಂಹಿತೆ ಉಲ್ಲಂಘಿಸಿ ಶಿವಾಜಿನಗರ ಕ್ಷೇತ್ರದಲ್ಲಿ ಗುರುವಾರ ಪ್ರಚಾರ ನಡೆಸಿದ್ದು, ಅವರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕೆಂದು ಆರೋಪಿಸಿ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳಿಗೆ ಬಿಜೆಪಿ ದೂರು ನೀಡಿದೆ. ಬಿಜೆಪಿ ಚುನಾವಣಾ ವಿಭಾಗದ ಸಂಚಾಲಕ ದತ್ತಗುರು ಹೆಗಡೆ, ಕಾನೂನು ವಿಭಾಗದ ಹರ್ಷ ಮುತಾಲಿಕ್, ಸಂಚಾಲಕ ವಿವೇಕ್ ರೆಡ್ಡಿ ಅವರನ್ನು ಒಳಗೊಂಡ ನಿಯೋಗ ಮುಖ್ಯ ಚುನಾವಣಾಧಿಕಾರಿಗಳಿಗೆ ದೂರು ಸಲ್ಲಿಸಿತು. ಜೇವರ್ಗಿ ಶಾಸಕ ಅಜಯ್‌ಸಿಂಗ್ ಅವರು ಗುರುವಾರವೂ ಶಿವಾಜಿನಗರದಲ್ಲಿ ಬಹಿರಂಗ ಪ್ರಚಾರ ನಡೆಸಿದ್ದಾರೆ. ಅವರ ಪ್ರಚಾರವನ್ನು ಬಿಜೆಪಿ ಕಾರ್ಯಕರ್ತರು ತಡೆಯಲು ಯತ್ನಿಸಿದ್ದಾರೆ. ನೀತಿ ಸಂಹಿತೆ ಜಾರಿಯಲ್ಲಿರುವ ಸಂದರ್ಭದಲ್ಲೇ ಬೇರೊಂದು ಕ್ಷೇತ್ರದಲ್ಲಿ ಪ್ರಚಾರ ನಡೆಸಿ ಅಜಯ್ ಸಿಂಗ್ ನೀತಿ ಸಂಹಿತೆ ಉಲ್ಲಂಘಿಸಿದ್ದಾರೆ. ಹಾಗಾಗಿ ಅವರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕೆಂದು ಬಿಜೆಪಿ ನಿಯೋಗ ದೂರಿನಲ್ಲಿ ಮನವಿ ಮಾಡಿದೆ.